**<u>ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಮಂಜೇಗೌಡ ಇವರು ನಿಯಮ 72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಯ ಕುರಿತು.</u>**

**<u>ನಿಯಮ 72ರಡಿ ಸೂಚನೆ:</u>**

ಮೈಸೂರು ಜಿಲ್ಲೆಯ ಹಿಂದಿನ ಜಿಲ್ಲಾಧಿಕಾರಿಯಾದ ಶ್ರೀಮತಿ ರೋಹಿಣಿ ಸಿಂಧೂರಿ ರವರು ನಿಯಮಬಾಹಿರವಾಗಿ ಮೈಸೂರು ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಟ್ಟೆ ಬ್ಯಾಗ್‌ಗಳ ಸರಬರಾಜು ಮಾಡಲು 4(ಹೆಚ್) ವಿನಾಯಿತಿಯಡಿ ಮಾರುಕಟ್ಟೆಗಿಂತ ಹೆಚ್ಚಿನ ದರದಲ್ಲಿ ಪೂರೈಸಿ, ಭ್ರಷ್ಟಾಚಾರದಲ್ಲಿ ಭಾಗಿಯಾಗಿರುತ್ತಾರೆ ಮತ್ತು ಜಿಲ್ಲಾಧಿಕಾರಿಗಳ ನಿವಾಸವನ್ನು ಪಾರಂಪರಿಕ ಇಲಾಖೆಯ ಅನುಮತಿ ಇಲ್ಲದೇ, ನವೀಕರಣದ ಹೆಸರಿನಲ್ಲಿ ಸರ್ಕಾರದ ಹಣವನ್ನು ದುಂದುವೆಚ್ಚ ಮಾಡಿರುವ ಆರೋಪ ಇರುತ್ತದೆ. ಅಲ್ಲದೇ, ಕೋವಿಡ್‌ನಿಂದ ಮೃತಪಟ್ಟವರ ಮಾಹಿತಿಯನ್ನು ತಪ್ಪಾಗಿ ನಮೂದಿಸಿರುತ್ತಾರೆ. ಈವರೆಗೆ ಪ್ರಾಥಮಿಕ ತನಿಖೆ ನಡೆದಿದ್ದರೂ ಸದರಿಯವರ ವಿರುದ್ಧ ತನಿಖೆ ನಡೆಸಿ ವರದಿ ನೀಡುವಂತೆ ಸರ್ಕಾರದ ಆದೇಶದಲ್ಲಿ ಸೂಚಿಸಲಾಗಿರುತ್ತದೆ.

ಆರೋಪಿತರ ವಿರುದ್ಧ ತನಿಖೆಗೆ ಸರ್ಕಾರವು ಈವರೆಗೆ 9 ತಿಂಗಳೂ ಕಳೆದರೂ ಸಹ ಇವರ ವಿರುದ್ಧ ಗುರುತರವಾದ ಆರೋಪಗಳಿದ್ದರೂ ಕೂಡ ಸೂಕ್ತ ಕ್ರಮ ಕೈಗೊಳ್ಳದೇ ತನಿಖೆಯನ್ನು ಮುಂದೂಡುತ್ತಾ ಬಂದಿದ್ದಾರೆ. ಈ ವಿಷಯವನ್ನು ಸನ್ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯಲು ಬಯಸುತ್ತೇನೆ.

**<u>ಸರ್ಕಾರದ ಉತ್ತರ:</u>**

ಶ್ರೀಮತಿ ರೋಹಿಣಿ ಸಿಂಧೂರಿ, ಭಾ.ಆ.ಸೇ., ಹಿಂದಿನ ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ ಇವರ ವಿರುದ್ಧದ ಆರೋಪಗಳಾದ ಮೈಸೂರು ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಟ್ಟೆ ಬ್ಯಾಗ್‌ಗಳ ಸರಬರಾಜು ಮಾಡಲು 4(ಹೆಚ್) ವಿನಾಯಿತಿಯಡಿ ಮಾರುಕಟ್ಟೆಗಿಂತ ಹೆಚ್ಚಿನ ದರದಲ್ಲಿ ಪೂರೈಸಿರುವ ಕುರಿತಾದ ಆರೋಪ ಹಾಗೂ ಜಿಲ್ಲಾಧಿಕಾರಿಗಳ ನಿವಾಸವನ್ನು ಪಾರಂಪರಿಕ ಇಲಾಖೆಯ ಅನುಮತಿ ಇಲ್ಲದೇ, ನವೀಕರಣದ ಕುರಿತಾದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 218 ಸೇಅಸೆ 2022, ದಿನಾಂಕ: 09.06.2023ರಲ್ಲಿ ವಿಚಾರಣಾಧಿಕಾರಿಯವರನ್ನು ನೇಮಿಸಲಾಗಿದೆ ಹಾಗೂ ವಿಚಾರಣಾಧಿಕಾರಿಯವರು ಹೆಚ್ಚಿನ ಕಾಲಾವಕಾಶವನ್ನು ಕೋರಿದ್ದು, ಪ್ರಸ್ತುತ ಪರಿಶೀಲನೆಯಲ್ಲಿದೆ.

**ಸಂಖ್ಯೆ: ಸಿಆಸುಇ 28 ಎಸ್‌ಇಸಿ 2024**

**(ಸಿದ್ದರಾಮಯ್ಯ)**
**ಮುಖ್ಯ ಮಂತ್ರಿಗಳು**